ಶ್ರೀ ಭಗವಾನ್ ಮಹಾವೀರ್ ಜೈನ್ ಸ್ವತಂತ್ರ ಪದವಿಪೂರ್ವ ಕಾಲೇಜು

ದ್ವಿತೀಯ ಪಿ.ಯು.ಸಿ **Mock Paper -1,** ಜನವರಿ 2017

**ವಿಷಯ : ಕನ್ನಡ**

**ಸಮಯ : 3 ಗಂಟೆ 15 ನಿಮಿಷ** **ಒಟ್ಟು ಅಂಕಗಳು : 100**

---

**ಅ–ವಿಭಾಗ**

**I. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ : 10 × 1 = 10**

1. ರಾವಣನ ಎದುರು ಪ್ರತ್ಯಕ್ಷವಾದ ವಿದ್ಯಾದೇವತೆ ಯಾರು?
2. ರಾಜಸಭೆಯೊಳಗೆ ದ್ರೌಪದಿಯನ್ನು ಒದೆದವರು ಯಾರು?
3. ಲಕ್ಷದಾರಿಗಳ ಚದುರಂಗದಾಟ ಯಾವುದು?
4. ಚಿತ್ತವನ್ನು ಯಾವುದಕ್ಕೆ ಹೋಲಿಸಲಾಗಿದೆ?
5. ಕನ್ನಡದ ಮೂಲಕ ಕಲಿತು ಶ್ರೇಷ್ಠ ವಿಜ್ಞಾನಿಯಾದವರು ಯಾರು?
6. ಮನೋರಮೆ ಬಹುಮಾನವಾಗಿ ಮುದ್ದಣನಿಗೆ ಏನನ್ನು ಕೊಡುವೆನೆಂದಳು?
7. ಕಲಿಯುಗದ ಅಮೃತ ಯಾವುದು?
8. ಕೃಷ್ಣೇಗೌಡನ ಆನೆಯ ಮಾವುತನ ಹೆಸರೇನು?
9. ಶಿವೇಗೌಡರು ರಾತ್ರೋರಾತ್ರಿ ಆನೆ ಕರೆದುಕೊಂಡು ಹೋದುದ್ದೇಕೆ?
10. ಕೃಷ್ಣೇಗೌಡನನ್ನು ಕೊನೆಯಲ್ಲಿ ಕಾಡಿದ ಕಳವಳವೇನು?

**ಆ–ವಿಭಾಗ**

**II.(ಅ) ಕೆಳಗಿನ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 4 × 2 = 8**

11. ರಾವಣನು ಸೊಕ್ಕಿನಿಂದ ಸೀತೆಯನ್ನುದ್ದೇಶಿಸಿ ಆಡಿದ ಮಾತುಗಳಾವುವು?
12. ಉರಿಲಿಂಗಪೆದ್ದಿಯ ಪ್ರಕಾರ ಗುರುವಿನ ಲಕ್ಷಣಗಳೇನು?
13. ಜಾಲಿಯ ಮರದ ನಿರರ್ಥಕತೆಯನ್ನು ಪುರಂದರದಾಸರು ಹೇಗೆ ತಿಳಿಸಿದ್ದಾರೆ?
14. 'ಮುಂಬೈ ಜಾತಕ' ಕವಿತೆಯಲ್ಲಿ ಚಿತ್ರಿಸಿರುವಂತೆ ಮಗು ಹುಟ್ಟಿ ಬೆಳೆದುದು ಎಲ್ಲಿ?
15. ದನಗಳಿಗೆ ಜನಗಳಿಗೆ ಏನೇನು ಇಲ್ಲ?

**(ಆ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 =6**

16. ಲೇಖಕರಲ್ಲಿ ಕನ್ನಡ ಪ್ರೀತಿ ಸ್ಫುರಿಸಿದು ಹೇಗೆ?
17. ಮುದ್ದೇಗೌಡರು ಪದ್ಯದ ವಿಚಾರವಾಗಿ ಹೊಂದಿದ್ದ ನಿಲುವು ಯಾವುದು?
18. ಕಲಾಂ ಅವರು ಬಂಡೆಗಳ ಬಸಿರಲ್ಲಿ ಕಂಡದ್ದೇನು?
19. ಸಂಸ್ಕೃತ–ಕನ್ನಡಗಳು ಸೇರಿದರೆ ಹೇಗೆ ಸೊಗಸಾಗಿರುತ್ತದೆ?

**(ಇ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 = 6**

20. ಆನೆ ಸಾಕುವುದರ ಬಗ್ಗೆ ಜನರ ನಂಬಿಕೆ ಏನಾಗಿತ್ತು?
21. ಕಾಡಪ್ಪ ಶೆಟ್ಟರು ಯಾವ ವರ್ತಮಾನವನ್ನು ಮುಟ್ಟಿಸಿದರು?
22. ಜಬ್ಬಾರ್ ನಿರೂಪಕರಿಗೆ ಅಂಚೆ ವಿಲೇವಾರಿ ಬಗ್ಗೆ ಅಸಡ್ಡೆಯಿಂದ ಹೇಳಿದ್ದೇನು?
23. ಡ್ರೈವರ್ ಅಬ್ಬಾಸ್ ಕ್ಲೀನರ್ ಕೃಷ್ಣರ ಸಾವಿಗೆ ಕಾರಣವೇನು?

**ಇ–ವಿಭಾಗ**

**III.(ಅ) ಕೆಳಗಿನ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ: 2 × 3 = 6**

24. ಕಲಿಭೀಮನೇ ಮಿಡುಕುಳ್ಳ ಗಂಡನು
25. ಆಪತ್ತಿನೊಳ್ ಮಣಿದು ನೋಡದ ಬಂಧುವೇತಕೆ
26. ಬಲೆಬೀಸಿ ಬಂದ, ಆಗೋ ಬೆಳಕು ಬೇಟೆಗಾರ

**(ಆ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

27. ಹಾಡುವುದು ಅವುಗಳಿಗೆ ಅನಿವಾರ್ಯ; ಅವುಗಳ ಕರ್ಮ
28. ಕನ್ನಡಿಗರು ಮೊದಲು ಕನ್ನಡದವರಾಗಬೇಕು.

**(ಇ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

29. ನಮ್ಮ ಕಡೆ ಕೆಮ್ಮು ಕಾಲಿಂಗ್‌ಬೆಲ್ ಇದ್ದ ಹಾಗೆ.
30. ಕೃಷ್ಣೇಗೌಡರ ಆನೆಗೂ ಕಚ್ಚಿದೆ ಅಂತ ವರ್ತಮಾನ ಉಂಟಪ್ಪ.

## ಈ–ವಿಭಾಗ

**IV.(ಅ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 3 × 4 = 12**

31. ಶಿವಪಥವನ್ನರಿಯದವನ ಭಕ್ತಿ ನಿರರ್ಥಕವೆಂಬುದನ್ನು ಬಸವಣ್ಣ ಯಾವ ಯಾವ ಉದಾಹರಣೆಗಳ ಮೂಲಕ ವಿವರಿಸಿದ್ದಾರೆ?
32. ತನಗಾದ ಅವಮಾನವನ್ನು ದ್ರೌಪದಿ ಭೀಮನಿಗೆ ಹೇಳಿಕೊಂಡ ಬಗೆಯನ್ನು ವಿವರಿಸಿ.
33. ಜನಪದರು ಹೇಳುವಂತೆ ನಮ್ಮ ನೆರೆಹೊರೆ ಹೇಗಿರಬೇಕು? ವಿವರಿಸಿ.
34. ಯಾವ ಸ್ಥಳಗಳಲ್ಲಿ ಜೀಸಸ್ ದಿನನಿತ್ಯ ಶಿಲುಬೆ ಏರಿದ್ದಾನೆ? ಚರ್ಚಿಸಿ.

**(ಆ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 2 × 4 = 8**

35. ಬಸಲಿಂಗ ಡಾ. ತಿಮ್ಮಪ್ಪನವರ ಸೂಚನೆಗಳನ್ನು ಪಾಲಿಸದೆ ಇರಲು ಕಾರಣವೇನು?
36. ಕಮಲಾ ಮೇಡಂಗೆ ಮೂತ್ರಪಿಂಡದಲ್ಲಿ ಕಲ್ಲು ಮೂಡಿದ್ದೇಕೆ?
37. ಮುಸುರೆ ಪಾತ್ರಗಳು ನೀರು ಪಾಲಾದುದು ಹೇಗೆ? ಅವುಗಳನ್ನು ಮೇಲೆತ್ತಲು ಮಾಡಿದ ಪ್ರಯತ್ನಗಳೇನು?

**(ಇ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 2 × 4 = 8**

38. ಕೃಷ್ಣೇಗೌಡನ ಆನೆ ಹುಟ್ಟಿಬೆಳೆದ ಬಗೆಯನ್ನು ವಿವರಿಸಿ.
39. ಟೆಲಿಫೋನ್ ಲೈನ್‌ಮನ್ ತಿಪ್ಪಣ್ಣನ ಸಾವಿನ ಸಂದರ್ಭವನ್ನು ವಿವರಿಸಿ.
40. ನಾಗರಾಜನ ನಿಗೂಢ ಕಣ್ಮರೆಯ ಬಗ್ಗೆ ಜನರ ಅಭಿಪ್ರಾಯಗಳೇನು?

## ಉ–ವಿಭಾಗ

**V. (ಅ) ಕೆಳಗಿನ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ : 1 × 5 = 5**

41. ಇವರಂ ಪ್ರಾಣಪ್ರಿಯರಂ
ನೆವಮಿಲ್ಲದೆ ಕರ್ಮವಶಮೆ ನೆವಮೆನೆ ಕಂದ
ರ್ಪವಿಮೋಹದಿಂದಗಲ್ಚಿದೆ
ನವಿವೇಕಿಯನೆನ್ನ ಕುಲದ ಪೆಂಪಜೀವಿನೆಗಂ ॥

**ಅಥವಾ**

42. ಕೆಲವಂ ಬಲ್ಲವರಿಂದ ಕಲ್ತು ಕೆಲವಂ ಶಾಸ್ತ್ರಂಗಳಂ ಕೇಳುತು
ಕೆಲವಂ ಮಾಳ್ಪರಿಂದ ಕಂಡು ಕೆಲವಂ ಸುಜ್ಞಾನದಿಂದ ನೋಡುತಂ ॥
ಕೆಲವಂ ಸಜ್ಜನ ಸಂಘದಿಂದಲರಿಯಲ್ ಸರ್ವಜ್ಞನಪ್ಪಂ ನರಂ ।
ಪಲವುಂ ಪಳ್ಳ ಸಮುದ್ರವೈ ಹರಹರಾ ಶ್ರೀಚೆನ್ನಸೋಮೇಶ್ವರಾ ॥

**(ಆ) ಭಾಷಾಭ್ಯಾಸ :**

**ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರವನ್ನು ಬರೆಯಿರಿ : 6 × 2 = 12**

43. **ಅರ್ಥ ಬರೆಯಿರಿ :** 1. ಸ್ವಾದ 2. ಪಂಕ
44. **ಸ್ವಂತ ವಾಕ್ಯದಲ್ಲಿ ಬರೆಯಿರಿ :** 1. ಮೊರೆಯಿಡು 2. ತಲೆಕೊಡವು
45. **ಸಮಾನಾರ್ಥಕ ಪದಗಳನ್ನು ತಿಳಿಸಿ :** 1. ತಮೆ 2. ಮಾಹೆ
46. **ತದ್ಭವರೂಪ ಬರೆಯಿರಿ :** 1. ಶ್ರೀ 2. ಆಯುಷ್ಯ
47. **ಗುಣವಾಚಕಗಳನ್ನು ಗುರುತಿಸಿ :** 1. ಮರಿಮೀನು 2. ಉಗ್ರಕೋಪ
48. **ಕಾಲವನ್ನು ತಿಳಿಸಿ :** 1. ಬಂದರು 2. ಹೋಗುವಳು
49. **ನಾನಾರ್ಥಕಗಳನ್ನು ಬರೆಯಿರಿ :** 1. ಕಲಿ 2. ಹೊಳೆ

**(ಇ) ಪತ್ರಲೇಖನ : ಈ ಕೆಳಗಿನ ಯಾವುದಾದರೂ ಒಂದನ್ನು ಕುರಿತು 15 ವಾಕ್ಯಗಳಿಗೆ ಮೀರದಂತೆ ಒಂದು ಪ್ರಬಂಧವನ್ನು ಬರೆಯಿರಿ ಬರೆಯಿರಿ 1 × 4 = 4**

50. ತ್ಯಾಜ್ಯ ವಸ್ತುಗಳ ಪುನರ್ಬಳಕೆ
51. ಮಾತೃಭಾಷೆಯಲ್ಲಿ ಶಿಕ್ಷಣ

**(ಈ) ಪತ್ರಲೇಖನ : ಈ ಕೆಳಗಿನ ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ : 1 × 4 = 4**

52. ಬ್ಯಾಂಕಿನಲ್ಲಿ ಉಳಿತಾಯ ಖಾತೆಯ ಅಕೌಂಟ್ ತೆರೆಯಲು ವ್ಯವಸ್ಥಾಪಕರಿಗೊಂದು ಪತ್ರ ಬರೆಯಿರಿ.
53. ನಿಮ್ಮ ಹುಟ್ಟು ಹಬ್ಬಕ್ಕೆ ಆಹ್ವಾನಿಸಿ ನಿಮ್ಮ ಗೆಳೆಯ/ಗೆಳತಿಗೆ ಪತ್ರ ಬರೆಯಿರಿ.

**(ಉ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ : 1 × 4 = 4**

54. ದೇಶ ಸುತ್ತಬೇಕು, ಕೋಶ ಓದಬೇಕು
55. ಉತ್ಸಾಹವೇ ಯಾವನ, ಚಿಂತೆಯೇ ಮುಪ್ಪು

*****

ಶ್ರೀ ಭಗವಾನ್ ಮಹಾವೀರ್ ಜೈನ್ ಸ್ವತಂತ್ರ ಪದವಿಪೂರ್ವ ಕಾಲೇಜು

ದ್ವಿತೀಯ ಪಿ.ಯು.ಸಿ **Mock Paper -2,** ಜನವರಿ 2017

**ವಿಷಯ : ಕನ್ನಡ**

**ಸಮಯ : 3 ಗಂಟೆ 15 ನಿಮಿಷ** **ಒಟ್ಟು ಅಂಕಗಳು : 100**

**ಅ–ವಿಭಾಗ**

**I. ಕೆಳಗಿನ ಎಲ್ಲಾ ಪ್ರಶ್ನೆಗಳಿಗೆ ಒಂದೊಂದು ಪೂರ್ಣ ವಾಕ್ಯದಲ್ಲಿ ಉತ್ತರಿಸಿ : 10 × 1 = 10**

1. ಉರಿಲಿಂಗಪೆದ್ದಿಯ ವಚನಗಳ ಅಂಕಿತ ಯಾವುದು?
2. ನಿಷ್ಪ್ರಯೋಜಕ ಮಗ ಯಾರು?
3. ಏನು ಬಂದೇ ತೀರುತ್ತದೆ ಎಂಬ ನಂಬಿಕೆಯಲ್ಲಿ ಜೀಸಸ್ ಶಿಲುಬೆ ಏರಿದ್ದಾನೆ?
4. ಹತ್ತಿಯ ಬೀಜಕ್ಕೆ ಯಾವುದು ತಪ್ಪದ ಕರ್ಮ?
5. ಡಾ. ತಿಮ್ಮಪ್ಪ ಬಸಲಿಂಗನಿಗೆ ಯಾವ ವೈದ್ಯರನ್ನು ಕಾಣಬೇಕೆಂದು ಸೂಚಿಸಿದರು?
6. 'ಕಿಡ್ನಿಸ್ಟೋನ್' ಬಗ್ಗೆ ತಿಳಿಯಲು ಲೇಖಕಿ ಯಾರನ್ನು ಭೇಟಿ ಮಾಡಿದರು?
7. ಕಲಾಂ ಅವರ ಆತ್ಮಚರಿತ್ರೆಯ ಹೆಸರೇನು?
8. ದುರ್ಗಪ್ಪನ ಪ್ರಕಾರ ತರ್ಲೆ ಡಿಪಾರ್ಟ್‌ಮೆಂಟ್ ಯಾವುದು?
9. ಆನೆಗೆ ಜಗದ್ಗುರುಗಳನ್ನು ಹೊರುವ ಕೆಲಸ ತಪ್ಪಿಹೋದುದೇಕೆ?
10. ಟೆಲಿಫೋನ್ ಕಂಬದ ಮೇಲೆ ಮೃತನಾದ ಲೈನ್‌ಮನ್ ಯಾರು?

**ಆ–ವಿಭಾಗ**

**II.(ಅ) ಕೆಳಗಿನ ಯಾವುದಾದರೂ ನಾಲ್ಕು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 4 × 2 = 8**

11. ರಾವಣ ತನ್ನ ಅಂತಃಪುರದ ಸ್ತ್ರೀಯನ್ನು ಹೇಗೆ ಸಂತೈಸಿದನು?
12. ಯಾರಿಗೆ ತತ್ವಜ್ಞಾನ ಹೇಳಿ ಪ್ರಯೋಜನವಿಲ್ಲ?
13. ತಂದೆ ಮಗುವಿಗೆ ಕಾಣಿಸಿಕೊಳ್ಳುವ ಬಗೆ ಹೇಗೆ?
14. ಮುದುಕಿಯು ಯಾರನ್ನು ಏನೆಂದು ಪ್ರಾರ್ಥಿಸುವಳು?
15. ಜನರನ್ನು ಕವಯಿತ್ರಿ ಯಾವ ಯಾವುದರಿಂದ ಪಾರು ಮಾಡುವುದಾಗಿ ಹೇಳಿದ್ದಾರೆ?

**(ಆ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 = 6**

16. ತಾನು ಅದೃಷ್ಟವಂತಯೆಂದು ಲೇಖಕಿ ಭಾವಿಸಲು ಕಾರಣವೇನು?
17. ಕೇಂದ್ರದ ರೈಲು ಅಂಚೆ ಇಲಾಖೆಗಳು ಯಾವ ಧೋರಣೆ ಬೆಳೆಸಿಕೊಂಡಿವೆ?
18. ಕಲಾಂ ಮೇಷ್ಟ್ರು ಹೇಳಿದ ಯಶಸ್ಸಿನ ಪಂಚಾಕ್ಷರಿ ಮಂತ್ರ ಯಾವುದು?
19. ಸುದ್ದಿಯ ಸೂರಪ್ಪ ಗೊಂಬೆಯನ್ನು ಹೇಗೆ ವರ್ಣಿಸುತ್ತಾನೆ?

**(ಇ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಎರಡು–ಮೂರು ವಾಕ್ಯಗಳಲ್ಲಿ ಉತ್ತರಿಸಿ : 3 × 2 = 6**

20. ಮಠದವರಿಗೆ ಆನೆಗಿಂತ ವೇಲಾಯುಧನನ್ನು ಸಾಕಲು ತ್ರಾಸವಾದುದೇಕೆ?
21. ಫಾರೆಸ್ಟ್ ಡಿಪಾರ್ಟ್‌ಮೆಂಟಿನವರ ನಂಬರ್ ಒನ್ ಎನಿಮಿಗಳು ಯಾರು ಯಾರು?
22. ನಿರೂಪಕರು ಕ್ಯಾಲಿಕ್ಯುಲೇಟರಿನಲ್ಲಿ ಲೆಕ್ಕ ಮಾಡಿ ಜಬ್ಬಾರ್‌ಗೆ ಏನೆಂದರು?
23. ಆನೆಯನ್ನು ಹದ್ದುಬಸ್ತಿನಲ್ಲಿಡುವುದರ ಬಗ್ಗೆ ವೇಲಾಯುಧನ ಅಪ್ಪ ಏನು ತಿಳಿಸಿದ್ದ?

**ಇ–ವಿಭಾಗ**

**III.(ಅ) ಕೆಳಗಿನ ಯಾವುದಾದರೂ ಎರಡು ವಾಕ್ಯಗಳನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ: 2 × 3 = 6**

24. ಸಮಧಿಕರಾರ್ ಜಗತ್ತ್ರಯದೊಳಿನ್ನೆನಗೆ?
25. ಬಿನ್ನಾಣದ ಮಾತಿಗೆ ಕೊನೆಯಿಲ್ಲ
26. ಮಾಗುವ ಜೀವದ ಪಯಣ ಸಾಗುತ್ತಿದೆ ಸದ್ದಿಲ್ಲದೆ.

**(ಆ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

27. ನೀರು ಬಿದ್ದರೆ ಕಣ್ಣು ಹೋಗುವ ಅಪಾಯ ಇದೆ.
28. ನೀರಿಟ್ಟಿಯದ ಗಂಟಲೊಳ್ ಕಡುಬಂ ತುರುಕಿದಂತಾಯ್ತು

**(ಇ) ಕೆಳಗಿನ ಯಾವುದಾದರೂ ಒಂದು ವಾಕ್ಯವನ್ನು ಕುರಿತು ಸಂದರ್ಭ ಸೂಚಿಸಿ ಸ್ವಾರಸ್ಯಗಳನ್ನು ಬರೆಯಿರಿ : 1 × 3 = 3**

29. ವೆಪೆನ್ ಸಾರ್, ವೆಪನ್ ನಮಗೆ ಮುಖ್ಯ
30. ಇತ್ತ ಮುಖ ಹಾಕಲಿ, ಅದನ್ನು ಕೋವೀಲೇ ಹೊಡೀತೀನಿ

## ಈ–ವಿಭಾಗ

**IV.(ಅ) ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 3 × 4 = 12**

31. ಮನುಷ್ಯ ಮನುಷ್ಯರ ನಡುವೆ ಅಂತಃಕರಣಗಳು ಸ್ಪಂದಿಸಬೇಕಾದ ವಿಚಾರವನ್ನು ಬಸವಣ್ಣ ಹೇಗೆ ನಿರೂಪಿಸಿದ್ದಾರೆ?
32. ಭೀಮನು ದ್ರೌಪದಿಯನ್ನು ಹೇಗೆ ಸಂತೈಸಿದನು?
33. ಗರತಿ ತವರಿಗೆ ಏನೆಂದು ಹರಸುತ್ತಾಳೆ?
34. ಕ್ರಿಸ್ಮಸ್ ಮನೆಗೆ ಏನನ್ನು ಹೊತ್ತು ತಂದಿದೆ?

**(ಆ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 2 × 4 = 8**

35. ಅಭಿವೃದ್ಧಿ ತರುವ ಪ್ರಾಕೃತಿಕ ನಾಶದ ಸ್ವರೂಪವನ್ನು ಪಠ್ಯದ ಹಿನ್ನೆಲೆಯಲ್ಲಿ ಚರ್ಚಿಸಿ.
36. ತಮ್ಮ ಕುಟುಂಬದ ಮೇಲಿನ ಅಪವಾದವನ್ನು ನಿವಾರಿಸಿಕೊಳ್ಳುವ ಅವಕಾಶ ಇದ್ದರೂ ಚಿನ್ನಮ್ಮ ಆ ಸಾಧ್ಯತೆಯನ್ನು ನಿರಾಕರಿಸಲು ಕಾರಣವೇನು?
37. ಹಳ್ಳಿಯ ಹೋಟೇಲುಗಳಲ್ಲಿ ಬಂದ ನವೀನತೆಯ ಕುರಿತು ಬರೆಯಿರಿ.

**(ಇ) ಕೆಳಗಿನ ಯಾವುದಾದರೂ ಎರಡು ಪ್ರಶ್ನೆಗಳಿಗೆ ಐದಾರು ವಾಕ್ಯಗಳಲ್ಲಿ ಉತ್ತರಿಸಿ. 2 × 4 = 8**

38. ಎಲ್ಲರ ನಿರೀಕ್ಷೆ ಸುಳಾಗುವಂತೆ ಕೃಷ್ಣೇಗೌಡ ಆನೆಯನ್ನು ಹೇಗೆ ಸಾಕಿದ.
39. ಡ್ರೈವರ್ ಸಾವಿನ ಸುದ್ಧಿಯನ್ನು ಶಿವೇಗೌಡ ಮತ್ತಿತರರು ಹೇಗೆ ಮುಚ್ಚಿ ಹಾಕಿದರು?
40. ತನ್ನ ಆನೆಯ ಬಗ್ಗೆ ಕೃಷ್ಣೇಗೌಡನಲ್ಲಿ ಬೇಸರ ಮೂಡಲು ಕಾರಣಗಳೇನು?

## ಉ–ವಿಭಾಗ

**V. (ಅ) ಕೆಳಗಿನ ಯಾವುದಾದರೂ ಒಂದು ಪದ್ಯದ ಭಾವಾರ್ಥವನ್ನು ಬರೆಯಿರಿ : 1 × 5 = 5**

41. ರಾವಣನ ರೂಪು ಸೀತಾ
ದೇವಿಗೆ ತೃಣಕಲ್ಪಮಾಯ್ತು ಪತಿಭಕ್ತಿಯೊಳಾ
ರೀ ವನಿತೆಯ ತೆಱದಿಂ ಸ
ದ್ಭಾವನುನೊಳಕೊಂಡ ಪುಣ್ಯವತಿಯರ್ ಸತಿಯರ್

**ಅಥವಾ**

42. ಪರುಷದ ಗೃಹದೊಳಗಿದ್ದು, ತಿರಿವನೆ ಮನೆಮನೆಯ?
ತೊರೆಯೊಳಗಿದ್ದವನು ತೃಷೆಯಾಗಲರಸುವನೆ ಕೆರೆಯುದಕವ?
ಮಂಗಳಲಿಂಗ ಅಂಗದ ಮೇಲೆ ಇದ್ದು
ಅನ್ಯಲಿಂಗಗಳ ನೆನೆವನೆ ನಿಮ್ಮ ಭಕ್ತನು
ಉರಿಲಿಂಗ ಪೆದ್ದಿಪ್ರಿಯ ವಿಶ್ವೇಶ್ವರಾ

**(ಆ) ಭಾಷಾಭ್ಯಾಸ :**

**ಕೆಳಗಿನ ಪ್ರಶ್ನೆಗಳಲ್ಲಿ ಯಾವುದಾದರೂ ಆರಕ್ಕೆ ಸೂಚನೆಗೆ ಅನುಗುಣವಾಗಿ ಉತ್ತರವನ್ನು ಬರೆಯಿರಿ : 6 × 2 = 12**

43. ಸಮಾನಾರ್ಥಕಗಳನ್ನು ಬರೆಯಿರಿ : 1. ಮರ್ಕಟ 2. ಸಮರ
44. ಕ್ರಿಯಾಪದಗಳ ಧಾತುಗಳನ್ನು ಬರೆಯಿರಿ : 1. ಹೋದನು 2. ಮಾಡುವನು
45. ವಿಭಕ್ತಿ ಪ್ರತ್ಯಯವನ್ನು ಬರೆಯಿರಿ : 1. ಧರ್ಮಜನಿಗೆ 2. ರಾವಣನೆ
46. ತದ್ಭವರೂಪ ಬರೆಯಿರಿ : 1. ದೃಷ್ಟಿ 2. ಆಕಾಶ
47. ದ್ವಿರುಕ್ತಿಗಳನ್ನು ಸ್ವಂತ ವಾಕ್ಯದಲ್ಲಿ ಬರೆಯಿರಿ : 1. ಕೊನೆಕೊನೆಗೆ 2. ತುತ್ತತುದಿ
48. ನಾನಾರ್ಥ ಬರೆಯಿರಿ : 1. ಬಲ 2. ರಸ
49. ನಿಷೇಧರೂಪ ಬರೆಯಿರಿ : 1. ಕಾಣು 2. ನಿಲ್ಲು

**(ಇ) ಕೆಳಗಿನ ಯಾವುದಾದರೂ ಒಂದನ್ನು ಕುರಿತು 15 ವಾಕ್ಯಗಳಿಗೆ ಮೀರದಂತೆ ಒಂದು ಪ್ರಬಂಧವನ್ನು ಬರೆಯಿರಿ ಬರೆಯಿರಿ :**
**1 × 4 = 4**

50. ಭ್ರಷ್ಟಾಚಾರವನ್ನು ನಿರ್ಮೂಲನೆಗೊಳಿಸುವಲ್ಲಿ ಯುವ ಜನರ ಪಾತ್ರ.
51. ಕೆರೆ–ನದಿಗಳ ನೈರ್ಮಲ್ಯೀಕರಣ.

**(ಈ) ಪತ್ರಲೇಖನ : ಈ ಕೆಳಗಿನ ಯಾವುದಾದರೂ ಒಂದನ್ನು ಕುರಿತು ಪತ್ರ ಬರೆಯಿರಿ : 1 × 4 = 4**

52. ಕನ್ನಡ ನಾಡು ನುಡಿಯ ಅಭಿಮಾನವನ್ನು ಕುರಿತು ನಿಮ್ಮ ಗೆಳೆಯರಿಗೊಂದು ಪತ್ರ ಬರೆಯಿರಿ.
53. ಸಮರ್ಪಕ ನೀರಿನ ಪೂರೈಕೆಗಾಗಿ ಸಂಬಂಧಿಸಿದ ಇಲಾಖಾ ಮುಖ್ಯಸ್ಥರಿಗೆ ಪತ್ರವೊಂದನ್ನು ಬರೆಯಿರಿ.

**(ಉ) ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ : 1 × 4 = 4**

54. ಸಂತೆಯ ಹೊತ್ತಿಗೆ ಮೂರು ಮೊಳ ನೆಯ್ದಂತೆ
55. ತುಂಬಿದ ಕೊಡ ತುಳುಕುವುದಿಲ್ಲ.

*****